ಪ್ರಧಾನ ಸಿ.ಜೆ. ಮತ್ತು ಜೆ ಎಂಎಫ್‌ಸಿ ನ್ಯಾಯಾಲಯ, ಮದ್ದೂರು

| | | |
|---|---|---|
| ಸಾಕ್ಷಿಯ ಹೆಸರು | :- | ಮಂಜುನಾಥ |
| ತಂದೆ/ಗಂಡನ ಹೆಸರು | :- | ಹೊಂಗನಾಯಕ |
| ವಯಸ್ಸು | :- | 45 ವರ್ಷ |
| ಉದ್ಯೋಗ | :- | ವ್ಯಾಪಾರ |
| ವಾಸಸ್ಥಳ | :- | ಶ್ರೀರಂಗಪಟ್ಟಣ |

(ಸಾಕ್ಷಿಗೆ ದಿನಾಂಕಃ08-09-2025 ರಂದು ಪ್ರಮಾಣ ವಚನ ಬೋಧಿಸಲಾಯಿತು)

ಮುಖ್ಯ ವಿಚಾರಣೆಃ- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಸಾಕ್ಷಿಯು ಒಂದು ದಾಖಲೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿಯು ಮಹಜರ್ ಆಗಿದ್ದು ಅದನ್ನು ನಿಪಿ-3 ಎಂದು, ನಿಪಿ-3(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 10 ವರ್ಷದ ಹಿಂದೆ ಮಂಡ್ಯದಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿದ್ದು ಅದರಲ್ಲಿ ಏನು ಬರೆದಿದೆ ನನಗೆ ಗೊತ್ತಿಲ್ಲ. ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಸ್ವತ್ತನ್ನು ಅಮಾನತುಪಡಿಸಿಕೊಂಡಿದ್ದಾರೋ ಇಲ್ಲವೋ ನನಗೆ ಗೊತ್ತಿಲ್ಲ. ಆ ಬಗ್ಗೆ ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

ಪಾಟೀ ಸವಾಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ದಿಃ16-03-2015 ರಂದು ಮೈಸೂರಿನ ರೈಲ್ವೇ ಪೊಲೀಸ್ ರವರು ಆರೋಪಿ-3 ರವರ ಮನೆಯಲ್ಲಿ ನಗದನ್ನು ಅಮಾನತ್ತುಪಡಿಸಲು ನಿಮ್ಮನ್ನು ಮತ್ತು ಚಾಸಾ-5 ರವರ ನ್ನು ಆರೋಪಿ-3 ರವರ ಮನೆಗೆ ಕರೆದುಕೊಂಡು ಹೋಗಿ ನಿಮ್ಮಗಳ ಸಮಕ್ಷಮ ರೂ.500/- ನಗದಿನ 140 ನೋಟುಗಳನ್ನು ಅಂದರೆ ಒಟ್ಟು 70 ಸಾವಿರವನ್ನು ಅಮಾನತ್ತುಪಡಿಸಿಕೊಂಡು ಮಧ್ಯಾಹ್ನ 01-00 ರಿಂದ 02-00 ಗಂಟೆ ಸಮಯದಲ್ಲಿ ನಿಪಿ- 3 ರಂತೆ ಮಹಜರ್ ಜರುಗಿಸಿ ನನಗೆ ಓದಿ ಹೇಳಿ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ಅದೇ ದಿನ ನಾನು ಠಾಣೆಯಲ್ಲಿ " ದಿಃ16-03-2015 ರಂದು -----------------ನಾನು ಸಹಿ ಮಾಡಿರುತ್ತೇನೆಂದು ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸದರಿ ಹೇಳಿಕೆಯ ನಿರಾಕರಣೆಯ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು. ನಿಪಿ-3 ಮತ್ತು 4 ರಲ್ಲಿರುವ ಎಲ್ಲಾ ವಿಚಾರ ನನಗೆ ಗೊತ್ತಿದ್ದರೂ ಕೂಡಾ ಆರೋಪಿಗೆ ಸಹಾಯವಾಗಲೀ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಏನು ಇಲ್ಲವೆಂದು ಹೇಳಿರುತ್ತಾರೆ.**

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಒ

(ಶ್ರೀಮತಿ ನಳಿನ ಎಸ್.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ, ಮದ್ದೂರು